**3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**ಸಿ.ಸಿ.ನಂ. .313/2020**

**ದಿನಾಂಕಃ 16.04.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು ಃ | ಗೋವಿಂದಪ್ಪ | ಚಾಸಾ-2, ಪ್ರಾಸ.-6 |
| ತಂದೆಯ ಹೆಸರು ಃ | ನಾಗಪ್ಪ | |
| ವಯಸ್ಸು ಃ | 69 ವರ್ಷ | |
| ಉದ್ಯೋಗ ಃ | ನಿವೃತ್ತ ನೌಕರ | |
| ವಾಸ ಃ | ಕಾಮನಕೆರೆ | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಚಾಸಾ-1 ಮತ್ತು 3 ನನಗೆ ಗೊತ್ತು. ಮೃತ ವ್ಯಕ್ತಿಯ ಪರಿಚಯ ನನಗೆ ಅಪಘಾತವಾದ ನಂತರ ತಿಳಿಯಿತು. 2019 ನೇ ಸಾಲಿನಲ್ಲಿ ಕಡೂರು - ಹಿರೇನಲ್ಲೂರು ರಸ್ತೆ ಮದ್ಯದಲ್ಲಿರುವ ಕಾಮನಕೆರೆ ಶಾಲೆಯ ಮುಂಭಾಗದ ರಸ್ತೆಯಲ್ಲಿ ಅಪಘಾತದ ವಿಚಾರವಾಗಿ ಸ್ಥಳ ಮಹಜರ್ ಗೆ ಸಹಕರಿಸುವಂತೆ ಕೋರಿ ನನಗೆ ಮತ್ತು ಚಾಸಾ-3 ರವರಿಗೆ ಪೋಲಿಸರು ನೋಟಿಸು ಜಾರಿ ಮಾಡಿರುತ್ತಾರೆ. ಸದರಿ ನೋಟಿಸಿನ ಮೇರೆಗೆ ನಾನು ಮತ್ತು ಚಾಸಾ-3 ರವರು ಅಪಘಾತವಾದ ಸ್ಥಳಕ್ಕೆ ಹೋಗಿದ್ದು ಅಲ್ಲಿ ಮಧ್ಯಾಹ್ನ 12.00 ರಿಂದ 1.00 ಗಂಟೆವರೆಗೆ ಸ್ಥಳ ಮಹಜರ್ ಮಾಡಿರುತ್ತಾರೆ. ಸ್ಥಳ ಮಹಜರ್ ಗೆ ಯಾರು ಸ್ಥಳ ತೋರಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸ್ಥಳ ಮಹಜರ್ ಗೆ ನಮ್ಮ ಸಹಿ ಪಡೆದು ಛಾಯಾಚಿತ್ರವನ್ನು ತೆಗೆದಿರುತ್ತಾರೆ. ಸಾಕ್ಷಿಗೆ ಪೋಲಿಸ್ ನೋಟಿಸನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿ ಇರುವುದನ್ನು ನೋಡಿ ಗುರುತಿಸಿರುತ್ತಾರೆ. ಸದರಿ ನೋಟಿಸನ್ನು ನಿಪಿ-10 ಎಂದು, ಸಾಕ್ಷಿ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-2 ರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು, ಸದರಿ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ತೆಗೆಯಲಾದ ನಿಪಿ-3 ಮತ್ತು 4 ರ ಛಾಯಾಚಿತ್ರವನ್ನು ನೋಡಿ ಅದರಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಭಾಗಶಃ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ**

ದಿಃ 06.12.2019 ರಂದು ಸಂಜೆ 7.00 ಗಂಟೆ ಸಮಯದಲ್ಲಿ ಕೃಷ್ಣಮೂರ್ತಿ ರವರಿಗೆ ಅಪಘಾತವಾಗಿತ್ತು ಆ ವಿಚಾರಕ್ಕೆ ಸಂಬಂಧಿಸಿದಂತೆ ಸ್ಥಳ ಮಹಜರ್ ಗೆ ಸಹಕರಿಸುವಂತೆ ಕೋರಿ ನನಗೆ ಮತ್ತು ಚಾಸಾ-3 ರವರಿಗೆ ದಿಃ 07.12.2019 ರಂದು ನೋಟಿಸನ್ನು ಜಾರಿ ಮಾಡಿರುತ್ತಾರೆ ಎಂದರೆ ಸರಿ. ದಿಃ 07.12.2019 ರಂದು ನಾನು ಮತ್ತು ಚಾಸಾ-3 ರವರು ಸ್ಥಳ ಮಹಜರ್ ಗೆ ಹೋಗಿದ್ದು ಚಾಸಾ-1 ರವರು

ತೋರಿಸಿದ ಸ್ಥಳದಲ್ಲಿ ಮಧ್ಯಾಹ್ನ 1.00 ರಿಂದ 2.00 ರವರೆಗೆ ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿ.

**<u>ಪಾಟೀಸವಾಲುಃ ಶ್ರೀ ಎಂ ಎಸ್ ಎಲ್ ಆರೋಪಿ ಪರ ವಕೀಲರಿಂದಃ</u>**

ಪೋಲಿಸರು ನೋಟಿಸನ್ನು ನಮ್ಮ ಊರಿಗೆ ಬಂದು ನೀಡಿರುತ್ತಾರೆ. ನಿಪಿ-2 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ ಎಂದರೆ ಸರಿ. ಪೋಲಿಸರ ಕೋರಿಕೆ ಮೇರೆಗೆ ನಿಪಿ-2 ರ ಮಹಜರ್ ಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ. ಛಾಯಾಚಿತ್ರವನ್ನು ಯಾವ ವಿಚಾರವಾಗಿ ತೆಗೆದಿರುತ್ತಾರೆ ಎಂಬ ಬಗ್ಗೆ ನನಗೆ ಮಾಹಿತಿ ಇಲ್ಲಾ. ಮಹಜರ್ ಸಮಯದಲ್ಲಿ ಸುಮಾರು 25-30 ಜನ ಸೇರಿದ್ದರು. ನನಗೆ ಅವರು ಯಾರು ಯಾರು ಎಂದು ಹೇಳಲು ಆಗುವುದಿಲ್ಲ. ಮಹಜರ್ ಸ್ಥಳದ ಚಕ್ಕುಬಂದಿಯನ್ನು ನನಗೆ ಹೇಳಲಾಗುವುದಿಲ್ಲ. ನನ್ನ ಸಮಕ್ಷಮ ಪೋಲಿಸರು ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ ಎಂದರೆ ಸರಿಯಲ್ಲ. ಮೃತ ವ್ಯಕ್ತಿಯ ಕುಟುಂಬದವರಿಗೆ ಪರಿಹಾರ ದೊರಕಿಸುವ ಸಲುವಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಘಟನೆ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲಾ ಎಂದರೆ ಸಾಕ್ಷಿಯ ಅಪಘಾತದ ಬಗ್ಗೆ ನನಗೆ ಖುದ್ದು ಮಾಹಿತಿ ಇಲ್ಲಾ ಪೋಲಿಸರು ಮಹಜರ್ ಗೆ ಸಹಕರಿಸುವಂತೆ ಕೋರಿರುವ ಮೇರೆಗೆ ಮಹಜರ್ ಗೆ ಪಂಚರಾಗಿ ಸಹಕರಿಸಿರುತ್ತೇನೆ ಎಂದು ನುಡಿಯುತ್ತಾರೆ. ಮಹಜರ್ ಸಮಯದಲ್ಲಿ ನಮ್ಮ ಸಮಕ್ಷಮ ಪೋಲಿಸರು ಕಚ್ಚಾ ನಕ್ಷೆ ತಯಾರಿಸಿರುವುದಿಲ್ಲ ಎಂದರೆ ಸರಿ.

**<u>ಮರು ವಿಚಾರಣೆ : ಇಲ್ಲ</u>**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ ಎ ಒ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.